ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಮಂಗಳವಾರ, ದಿನಾಂಕ : 23ನೇ ಜುಲೈ, 2019

ಹೊಸ ವೈದ್ಯಕೀಯ ಕಾಲೇಜುಗಳ ಕುರಿತು

ಶ್ರೀ ರವಿಕುಮಾರ್. ಎನ್ (ವಿಧಾನಸಭೆಯಿಂದ ಚುನಾಯಿತರಾದವರು):-

535 (498) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಲಾದಂತೆ ಎಷ್ಟು ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ;

(ಆ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಬೇಕಾಗಿರುವ ಎಲ್ಲಾ ಮೂಲಭೂತ ಸೌಲಭ್ಯಗಳು ಇದ್ದರೂ ಇರುವರೆಗೂ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸದಿರಲು ಕಾರಣವೇನು; ಸರ್ಕಾರಿ ಖಾಸಗಿ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಲಾಭಿಗೆ ಮಣಿದಿದೆಯೇ; ಈ ಕುರಿತು ಸರ್ಕಾರದ ನಿಲುವೇನು;

(ಇ) ಚಿಕ್ಕಮಗಳೂರು ಜಿಲ್ಲೆಯು ಮಲೆನಾಡಿನ ಪ್ರದೇಶವಾಗಿದ್ದು, ಈ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು;

(ಈ) 2019-20ನೇ ಶೈಕ್ಷಣಿಕ ಸಾಲಿನಲ್ಲಿ ಎಷ್ಟು ವೈದ್ಯಕೀಯ ಸೀಟುಗಳು ಲಭ್ಯವಿದೆ; ಇದರಲ್ಲಿ ಎನ್.ಆರ್.ಐ ಸೀಟುಗಳೆಷ್ಟು; ನೀಟ್ ಪರೀಕ್ಷೆಯ ಮೂಲಕ ತುಂಬಬಹುದಾದ ಸೀಟುಗಳೆಷ್ಟು; ಆಡಳಿತ ಮಂಡಳಿಯ ಸೀಟುಗಳೆಷ್ಟು; ಸರ್ಕಾರಿ ಸೀಟುಗಳೆಷ್ಟು ? (ಕಾಲೇಜುವಾರು ವಿವರ ನೀಡುವುದು)